# ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರ ಕಛೇರಿ ರಾಯಚೂರು

ಸಂಖ್ಯೆ: ಲೆವಿ5/ರೆಡ್ ಕ್ರಾಸ್ /ಪರೀಕ್ಷೆ/ /2025–26 / 2113 ದಿನಾಂಕ: 15–11–2025

**ಜ್ಞಾಪನ**

**ವಿಷಯ** : ಜೂನಿಯರ್ ರೆಡ್ ಕ್ರಾಸ್ ಪರೀಕ್ಷೆಯ ಕುರಿತು.

**ಉಲ್ಲೇಖ** : ಮಾನ್ಯ ಪ್ರಧಾನ ಕಾರ್ಯದರ್ಶಿಗಳು, ಭಾರತೀಯ ರೆಡ್ ಕ್ರಾಸ್ ಸಂಸ್ಥೆ, ಕರ್ನಾಟಕ, ಬೆಂಗಳೂರು ಇವರ ಪತ್ರದ ಸಂಖ್ಯೆ: IRCS/JRC-Exam/453-482/25-26 Dated: 03-11-2025.

>>>()<<<

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ ಭಾರತೀಯ ರೆಡ್ ಕ್ರಾಸ್ ಸಂಸ್ಥೆಯ ವತಿಯಿಂದ ಪ್ರೌಢ ಶಾಲೆ ವಿದ್ಯಾರ್ಥಿಗಳಿಗೆ ರೆಡ್ ಕ್ರಾಸ್ ಕಾರ್ಯ ಚಟುವಟಿಕೆಗಳ ಬಗ್ಗೆ ಅರಿವು ಮೂಡಿಸಲು ಪ್ರತಿ ವರ್ಷದಂತೆ ಈ ವರ್ಷವೂ ರೆಡ್ ಕ್ರಾಸ್ ಪರೀಕ್ಷೆಯನ್ನು ದಿನಾಂಕ: 06–12–2025 ರಂದು ಶನಿವಾರ ಬೆಳಿಗ್ಗೆ 10.30 ರಿಂದ 11.30 ಗಂಟೆಯವರೆಗೆ ನಡೆಸಲಾಗುತ್ತಿದ್ದು, ಸದರಿ ಪರೀಕ್ಷೆಗೆ ಹೆಚ್ಚಿನ ಸಂಖ್ಯೆಯಲ್ಲಿ ಪ್ರೌಢ ಶಾಲಾ ವಿದ್ಯಾರ್ಥಿಗಳು ಭಾಗವಹಿಸುವಂತೆ ಕ್ರಮ ಕೈಗೊಳ್ಳಲು ಕೋರಿರುತ್ತಾರೆ. ಹಾಗೂ ಪರೀಕ್ಷೆಯ ಶುಲ್ಕ ಮತ್ತು ಪುಸ್ತಕದ ಶುಲ್ಕವನ್ನು ಸಾಫ್ಟ್‌ವೇರ್ ಮೂಲಕ ಪಾವತಿಸಲು ಈ ಬಾರಿ ಅಧಿಕೃತ ವೆಬ್‌ಸೈಟ್ www.redcrosskarnataka.org ಮೂಲಕ ಅವಕಾಶ ಕಲ್ಪಿಸಲಾಗಿದೆ. ಅದರಂತೆ ಪಾವತಿ ಮಾಡಲು ತಿಳಿಸಿ ಹೆಚ್ಚಿನ ಮಾಹಿತಿಗಾಗಿ ಸುತ್ತೋಲೆ ಹಾಗೂ ಕರಪತ್ರಗಳನ್ನು ಪರಿಶೀಲಿಸಲು ತಿಳಿಸಿರುತ್ತಾರೆ.

ಪ್ರಯುಕ್ತ ಸದರಿ ಉಲ್ಲೇಖಿತ ಪತ್ರದ ಪ್ರತಿ ಹಾಗೂ ಕರಪತ್ರಗಳನ್ನು ಈ ಪತ್ರದೊಂದಿಗೆ ಲಗತ್ತಿಸಿ ಕಳುಹಿಸುತ್ತಾ, ಈ ಕುರಿತು ತಮ್ಮ ವ್ಯಾಪ್ತಿಯ ಎಲ್ಲಾ ಸರಕಾರಿ, ಅನುದಾನಿತ ಮತ್ತು ಅನುದಾನರಹಿತ ಪ್ರೌಢ ಶಾಲಾ ಮುಖ್ಯಸ್ಥರಿಗೆ ತಿಳಿಸಿ ಹೆಚ್ಚಿನ ಸಂಖ್ಯೆಯಲ್ಲಿ ಪ್ರೌಢ ಶಾಲಾ ವಿದ್ಯಾರ್ಥಿಗಳು ಭಾಗವಹಿಸುವಂತೆ ಕ್ರಮವಹಿಸಲು ಸೂಚಿಸಿದೆ.

**ಲಗತ್ತು:** ಉಲ್ಲೇಖಿತ ಪತ್ರದ ಪ್ರತಿ
ಹಾಗೂ ಕರಪತ್ರ

K. [signature] 15/11/25
ಉಪನಿರ್ದೇಶಕರು (ಆಡಳಿತ)
ಶಾಲಾ ಶಿಕ್ಷಣ ಇಲಾಖೆ ರಾಯಚೂರು

ಗೆ
ಕ್ಷೇತ್ರ ಶಿಕ್ಷಣಾಧಿಕಾರಿಗಳು
ದೇವದುರ್ಗ, ಲಿಂಗಸುಗೂರು, ಮಾನವಿ
ರಾಯಚೂರು ಮತ್ತು ಸಿಂಧನೂರು

**ಪ್ರತಿಯನ್ನು:**

1) ಮಾನ್ಯ ಪ್ರಧಾನ ಕಾರ್ಯದರ್ಶಿಗಳು, ಭಾರತೀಯ ರೆಡ್ ಕ್ರಾಸ್ ಸಂಸ್ಥೆ, ಕರ್ನಾಟಕ, ಬೆಂಗಳೂರು ಇವರ ಮಾಹಿತಿಗಾಗಿ ಸಲ್ಲಿಸಲಾಗಿದೆ.
2) ಕಛೇರಿ ಪ್ರತಿ.

JRC
INDIAN RED CROSS SOCIETY
Date 397
21/11/25
KARNATAKA STATE BRANCH